ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE 25/3/21

# ಸೀಡಿ ಗ್ಯಾಂಗ್‌ಗೆ ಸ್ಟಾರ್ ಹೋಟೆಲಲ್ಲಿ ಆಶ್ರಯ!

## ಹೋಟೆಲ್‌ಗಳ ಸಿಸಿಟೀವಿ ದೃಶ್ಯಾವಳಿ ಸಂಗ್ರಹಿಸಿದ ಎಸ್‌ಐಟಿ। ಮಾಸ್ಟರ್ ಮೈಂಡ್ ಪತ್ರಕರ್ತನ ಕೊನೆ ಕರೆ ಆಧರಿಸಿ ಪತ್ತೆಗೆ ಕಾರ್ಯಾಚರಣೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 25/3/21

ತಮ್ಮ ಬಲೆಗೆ ಬೀಳದೆ ಹೊರರಾಜ್ಯಗಳಲ್ಲಿ ಅವಿತು ಕೊಂಡಿರುವ ಮಾಜಿ ಸಚಿವರ ಸಿ.ಡಿ. ಸ್ಫೋಟ ತಂಡದ ಪತ್ತೆದಾರಿಕೆ ಮುಂದುವರೆಸಿರುವ ಎಸ್‌ಐಟಿ ಪೊಲೀಸರು, ಈಗ 'ಮಾಸ್ಟರ್ ಮೈಂಡ್' ಎನ್ನಲಾದ ಪತ್ರಕರ್ತ ನರೇಶ್ ಗೌಡ ಮಾಡಿರುವ ಕೊನೆ ಕರೆ ಆಧರಿಸಿ ಕಾರ್ಯಾಚರಣೆ ಬಿರುಸುಗೊಳಿಸಿದ್ದಾರೆ.

ಮಧ್ಯಪ್ರದೇಶದ ಭೋಪಾಲ್‌ನಲ್ಲೇ ಕೊನೆ ಬಾರಿ ನರೇಶ್‌ಗೌಡ ಮಾತನಾಡಿದ್ದಾನೆ ಎಂಬ ಮಾಹಿತಿ ಪಡೆದ ಎಸ್‌ಐಟಿ ಅಧಿಕಾರಿಗಳು, ಇದೇ ವಿಚಾರವಾಗಿ ಆತನ ಪತ್ನಿಯನ್ನು ಕೂಡ ವಿಚಾರಣೆ ನಡೆಸಿದ್ದಾರೆ.

ಆದರೆ ಆತನ ಕುಟುಂಬದವರು ನರೇಶ್‌ಗೌಡನ ಇರುವಿಕೆ ಬಗ್ಗೆ ಯಾವುದೇ ಸುಳಿವು ಬಹಿರಂಗಪಡಿಸಿಲ್ಲ ಎನ್ನಲಾಗಿದೆ. ಇನ್ನೊಂಡೆಡೆ ಭೋಪಾಲ್‌ನಲ್ಲೇ ಬೀಡು ಬಿಟ್ಟಿರುವ ಎಸ್‌ಐಟಿ ಅಧಿಕಾರಿಗಳು, ಸಿ.ಡಿ. ಸ್ಫೋಟದ ಗುಂಪಿನ ಆಶ್ರಯದಾತರ ಪತ್ತೆಗೆ ತೀವ್ರ ಹುಡುಕಾಟ ನಡೆಸಿದ್ದಾರೆ.

ಬೆಂಗಳೂರು ತೊರೆದ ಬಳಿಕ ಉತ್ತರ ಭಾರತದಲ್ಲಿ ತಲೆ ಮರೆಸಿಕೊಂಡಿರುವ ವಿವಾದಿತ ಯುವತಿ ಹಾಗೂ ಪತ್ರಕರ್ತರಾದ ನರೇಶ್‌ಗೌಡ ಮತ್ತು ಶ್ರವಣ್, ದೆಹಲಿ, ಉತ್ತರಪ್ರದೇಶದ ವಾರಾಣಾಸಿ, ಲಖನೌ ಹಾಗೂ ಮಧ್ಯ ಪ್ರದೇಶದ ಭೋಪಾಲ್ ವ್ಯಾಪ್ತಿಯಲ್ಲಿ ಓಡಾಡುತ್ತಿದ್ದಾರೆ. ಈ ಪ್ರದೇಶದಲ್ಲಿ ಅವರಿಗೆ ಐದಾರು ಪಂಚತಾರಾ ಹೋಟೆಲ್‌ಗಳಲ್ಲೇ ರಾಜಾಶ್ರಯ ಸಿಕ್ಕಿದೆ ಎನ್ನಲಾಗುತ್ತಿದೆ.

- **ಮಧ್ಯಪ್ರದೇಶದ ಭೋಪಾಲ್‌ನಲ್ಲೇ ನರೇಶ್‌ಗೌಡನಿಗಾಗಿ ಹುಡುಕಾಟ**
- **ಮಾಹಿತಿ ಬಿಟ್ಟು ಕೊಡದ ಮಾಸ್ಟರ್ ಮೈಂಡ್ ಕುಟುಂಬಸ್ಥರು**
- **ಮೊಬೈಲ್ ಟವರ್ ಲೊಕೇಷನ್ ಆಧರಿಸಿ ಪತ್ತೆಗೆ ಎಸ್‌ಐಟಿ ಪೊಲೀಸರ ಸರಸಾಹಸ**



### ಬೇರ್ಪಟ್ಟ ತಂಡ?

ಇನ್ನೊಂದೆಡೆ ಭೋಪಾಲ್ ತಲುಪಿದ ಬಳಿಕ ಸಿ.ಡಿ. ಸ್ಫೋಟದ ಗುಂಪಿನ ಸದಸ್ಯರು ಪ್ರತ್ಯೇಕವಾಗಿದ್ದು, ವಿವಾದಿತ ಯುವತಿಯನ್ನು ಬೇರೆಡೆ ಸುರಕ್ಷಿತ ತಾಣಕ್ಕೆ ತಲುಪಿಸಿದ್ದಾರೆ ಎನ್ನಲಾಗುತ್ತಿದೆ. ನೂರಾರು ಕಿ.ಮೀ. ತಲೆಮರೆಸಿಕೊಂಡು ಓಡಿದರೂ ಬೆಂಬಿಡದೆ ಬೆನ್ನಟ್ಟಿರುವ ಎಸ್‌ಐಟಿ ಕಾರ್ಯಾಚರಣೆಗೆ ಆತಂಕಗೊಂಡಿರುವ ಸಿ.ಡಿ. ಸ್ಫೋಟದ ತಂಡವು, ಎಸ್‌ಐಟಿ ದಿಕ್ಕು ತಪ್ಪಿಸುವ ಸಲುವಾಗಿ ಒಬ್ಬೊಬ್ಬರು ಒಂದು ದಿಕ್ಕಿನ ಕಡೆಗೆ ಹೋಗಿದ್ದಾರೆ ಎಂಬ ಶಂಕೆ ಪೊಲೀಸರು ವ್ಯಕ್ತಪಡಿಸಿದ್ದಾರೆ.

ಮೊಬೈಲ್ ಟವರ್ ಲೋಕೇಷನ್ ಸೇರಿದಂತೆ ತಾಂತ್ರಿಕ ಮಾಹಿತಿ ಆಧರಿಸಿ ಸಿ.ಡಿ. ಸ್ಫೋಟದ ಗುಂಪಿನ ಬೆನ್ನತ್ತಿರುವ ಪೊಲೀಸರು, ಶಂಕಿತ ಆರೋಪಿಗಳು ತಂಗಿದ್ದ ಹೋಟೆಲ್‌ಗಳಲ್ಲಿ ಪರಿಶೀಲಿಸಿ ಸಿಸಿಟೀವಿ ಕ್ಯಾಮೆರಾಗಳ ದೃಶ್ಯಾವಳಿ ಸಂಗ್ರಹಿಸಿದ್ದಾರೆ ಎಂದು ತಿಳಿದು ಬಂದಿದೆ.

# ರಮೇಶ್ ಜಾರಕಿಹೊಳಿ ಮೊಬೈಲ್ ಫೋನ್ ಎಸ್‌ಐಟಿಯಿಂದ ಜಪ್ತಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಸಿ.ಡಿ. ವಿವಾದಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ದಳದ (ಎಸ್‌ಐಟಿ) ಅಧಿಕಾರಿಗಳು ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರ ಮೊಬೈಲ್ ಅನ್ನು ಜಪ್ತಿ ಮಾಡಿದ್ದಾರೆ.



ಪ್ರಕರಣದ ಸಂಬಂಧ ಎಸ್‌ಐಟಿ ಎದುರು ಎರಡು ಬಾರಿ ಸುದೀರ್ಘ ವಿಚಾರಣೆಗೆ ಹಾಜರಾದ ಜಾರಕಿಹೊಳಿ ಸೂಕ್ತ ಉತ್ತರ ನೀಡಿರಲಿಲ್ಲ, ಈ ಅಸಮರ್ಪಕ ಮಾಹಿತಿ ಹಿನ್ನೆಲೆಯಲ್ಲಿ ಮಾಜಿ ಸಚಿವರ ಮೊಬೈಲ್ ಅನ್ನು ಎಸ್‌ಐಟಿ ವಶಕ್ಕೆ ಪಡೆದಿದೆ. ಬಳಿಕ ಅದನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ (ಎಫ್‌ಎಸ್‌ಎಲ್) ಪರಿಶೀಲನೆಗಾಗಿ ಕಳುಹಿಸಿದೆ ಎಂದು ತಿಳಿದು ಬಂದಿದೆ.

ತಮಗೆ ವಿವಾದಿತ ಯುವತಿ ಪರಿಚಯವಿಲ್ಲ, ಆಕೆಯೊಂದಿಗೆ ಸಂಭಾಷಣೆ ಸೇರಿದಂತೆ ಯಾವುದೇ ರೀತಿಯ ಒಡನಾಟವಿಲ್ಲ, ನಕಲಿ ಸಿ.ಡಿ. ಸೃಷ್ಟಿಸಿ ನನ್ನ ತೇಜೋವಧೆ ಮಾಡಿದ್ದಾರೆ ಎಂದು ಎಸ್‌ಐಟಿಗೆ ಮಾಜಿ ಸಚಿವರು ಹೇಳಿಕೆ ನೀಡಿದ್ದರು. ಆದರೆ ಎಸ್‌ಐಟಿ ತನಿಖೆ ವೇಳೆ ಆ ಯುವತಿ ಜತೆ ಮಾಜಿ ಸಚಿವರಿಗೆ ಪರಿಚಯವಿತ್ತು ಎನ್ನುವುದಕ್ಕೆ ಕೆಲವು ಪುರಾವೆ ಲಭಿಸಿದ್ದವು. ಹೀಗಾಗಿ ಮಾಜಿ ಸಚಿವರ ಮೊಬೈಲ್ ಅನ್ನು ವಶಕ್ಕೆ ಪಡೆದು ಪರಿಶೀಲಿಸಲು ಎಸ್‌ಐಟಿ ತೀರ್ಮಾನಿಸಿತು ಎಂದು ಮೂಲಗಳು ತಿಳಿಸಿವೆ.